ವಿಳಾಸ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ :registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು–570 005.

262
19/9/18

ವಿಷಯ: 2018–19ನೇ ಶೈಕ್ಷಣಿಕ ಸಾಲಿಗೆ ಅತಿಥಿಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆಯ ಸಂಬಂಧ ದಿನಾಂಕ 04–09–2018ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿ.
2. ವಿಶ್ವವಿದ್ಯಾನಿಲಯದ ಪ್ರಕಟಣೆ ಸಂಖ್ಯೆ: ಇಟಿ.11/45/2018–19, ದಿನಾಂಕ 24–08–2018.

---

**ಆದೇಶ ಸಂಖ್ಯೆ: ಇಟಿ–10/204/2018–19, ದಿನಾಂಕ 17 ನೇ ಸೆಪ್ಟಂಬರ್ 2018**

ದಿನಾಂಕ 04–09–2018ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ಶಿಫಾರಸು (ನಿರ್ಣಯ) ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2018–19ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರಕೇಂದ್ರ / ಘಟಕಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|
| ಡಾ. ಆಶಾರಾಣಿ ಎಸ್, 11 ನೇ ಮೇನ್,# 45, ಇ ಬ್ಲಾಕ್, 14 ನೇ ಕ್ರಾಸ್, ಜೆ.ಪಿ ನಗರ, ಮೈಸೂರು –31. ನಂ. 9886175547. | ಅರ್ಥಶಾಸ್ತ್ರ | 12 | ಡಾ. ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಚಾಮರಾಜನಗರ. | 22,500/– |

A

19/9/18

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್‌ಕಾರ್ಯದ ಬಗ್ಗೆ ಸಂಬಂಧಿಸಿದ ಕೇಂದ್ರದ ನಿರ್ದೇಶಕರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ಕೇಂದ್ರದ ನಿರ್ದೇಶಕರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012–13 ನೇಪಾವಿ–1, ದಿನಾಂಕ 02–07–2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

Scanned with CamScanner